# ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಉದ್ಯಮ)

ದೇವರಾಜ ಅರಸು ಭವನ, 4ನೇ ಮಹಡಿ, ನಂ. 16–ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು – 560 052.


ಸಂಖ್ಯೆ: ದೇಹಿನಿ/ಸ/ಕ್ರಿಯೋ./ಪಿಆರ್–04/2022–23 ದಿನಾಂಕ:11.07.2022

## ಪ್ರಕಟಣೆ

**ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2022–23ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಿಗೆ ಸುವಿಧಾ ತಂತ್ರಾಂಶದ ಮುಖಾಂತರ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.**

**ಡಿ. ದೇವರಾಜು ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ**

ಹಿಂದುಳಿದ ವರ್ಗಗಳ ಈ ಯೋಜನೆ ಸೌಲಭ್ಯ ಪಡೆಯಲು, ಸ್ವಯಂ ಉದ್ಯೋಗಕ್ಕಾಗಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು **ಗರಿಷ್ಠ ರೂ. 2.00 ಲಕ್ಷಗಳ ವರೆಗೆ ಆರ್ಥಿಕ ನೆರವು,** ಇದರಲ್ಲಿ ಗರಿಷ್ಠ **ಶೇ. 15ರಷ್ಟು ಸಹಾಯಧನ,** ಉಳಿಕೆ ಮೊತ್ತ ವಾರ್ಷಿಕ ಶೇ 4ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಪಡೆಯಲು ಬಯಸುವವರು ಹಿಂದುಳಿದ ವರ್ಗಗಳ **ಪ್ರವರ್ಗ–1, 2ಎ, 3ಎ ಮತ್ತು 3ಬಿ** ಗೆ ಸೇರಿದವರಾಗಿರಬೇಕು. **(ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಹಟ್ಟಿಗೊಲ್ಲ, ಮರಾಠ ಮತ್ತು ಇದರ ಉಪ ಸಮುದಾಯಗಳು ಹೊರತುಪಡಿಸಿ).** ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ. 98,000/– ಗಳು ಪಟ್ಟಣ ಪ್ರದೇಶದವರಿಗೆ ರೂ. 1,20,000/– ಗಳ ಒಳಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷಗಳ ಮಿತಿಯಲ್ಲಿರಬೇಕು. ಈ ಯೋಜನೆಯಡಿಯಲ್ಲಿ ಸೌಲಭ್ಯ ಒದಗಿಸಲು ಸುವಿಧಾ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು (ಶ್ರೀ / ಶ್ರೀಮತಿ / ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

**ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು **https://suvidha.karnataka.gov.in** ಜಾಲತಾಣದಲ್ಲಿ ಅರ್ಜಿಯನ್ನು ಸಲ್ಲಿಸಬಹುದು ಹಾಗೂ ನಿಗಮದ ವೆಬ್‌ಸೈಟ್ **https://dbcdc.karnataka.gov.in** ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ಪಡೆಯಲು ನಿಗಮದ ಸಹಾಯವಾಣಿ ಸಂಖ್ಯೆ : 080–22374832, 9606066389 ಮತ್ತು 8824300400 ಅಥವಾ ಆಯಾ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿದ್ದು ಅದರಂತೆ ಸಂಪರ್ಕಿಸಬಹುದು. ಆನ್‌ಲೈನ್ ಮೂಲಕ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ **ದಿನಾಂಕ 24.08.2022 ರೊಳಗೆ** ಸುವಿಧಾ ತಂತ್ರಾಂಶದ ಮುಖಾಂತರ ಸಲ್ಲಿಸುವುದು.

**: ಸೂಚನೆ :**

**ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ. ದೇವರಾಜ ಅರಸು ಹಿಂದುಳಿ ವರ್ಗಗಳ ಅಭೀವೃದ್ಧಿ ನಿಗಮದ ಕಛೇರಿಯ ಅವಧಿಯಲ್ಲಿ ಉಚಿತವಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ವ್ಯವಸ್ಥೆ ಇರುತ್ತದೆ.**

ಸಹಿ/–
(ವಿ. ರವಿ)
ವ್ಯವಸ್ಥಾಪಕ ನಿರ್ದೇಶಕರು

ವಾಸಾಸಂಇ/ವಾಪ್ರ/ಜಗದಾಳೆ ಅಡ್ವರ್ಟೈಸಿಂಗ್/1352/2022–23

ಕೋವಿಡ್–19 – ಗಾಬರಿಬೇಡ ಎಚ್ಚರವಿರಲಿ, ಜವಾಬ್ದಾರಿಯಿಂದ ವರ್ತಿಸಿ, ಸೋಂಕನ್ನು ದೂರವಿಡಿ–ಸೋಂಕಿತರನ್ನಲ್ಲ.

ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ